ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ:ಜಿಎಲ್13/152/2022-23

ದಿನಾಂಕ.24.08.2026

## ಸುತ್ತೋಲೆ

ವಿಷಯ: ದಿನಾಂಕ: 05.09.2026ರಂದು **"ಶಿಕ್ಷಕರ ದಿನಾಚರಣೆ"** ಕಾರ್ಯಕ್ರಮಕ್ಕೆ ಭಾಗವಹಿಸುವ ಬಗ್ಗೆ
ಉಲ್ಲೇಖ: ಮಾನ್ಯ ಕುಲಪತಿಯವರ ಟಿಪ್ಪಣಿ ಸಂಖ್ಯೆ:ಕುಪ/ಇತರೆ/2026-27, ದಿನಾಂಕ.20.08.2026.

-:-

ಮೈಸೂರು ವಿಶ್ವವಿದ್ಯಾನಿಲಯದ ವತಿಯಿಂದ ದಿನಾಂಕ.05-09-2026 ರಂದು ಬೆಳಗ್ಗೆ 11.00 ಗಂಟೆಗೆ ಕ್ರಾಫರ್ಡ್ ಭವನದ ಸಭಾಂಗಣದಲ್ಲಿ **"ಶಿಕ್ಷಕರ ದಿನಾಚರಣೆ"** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಕಾರ್ಯಕ್ರಮದ ಪ್ರಯುಕ್ತ ವಿಶೇಷ ಉಪನ್ಯಾಸವನ್ನು ಒರಿಸ್ಸಾ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಾಧೀಶರಾದ ಗೌರವಾನ್ವಿತ **ಶ್ರೀ ನ್ಯಾಯಮೂರ್ತಿ ದೀಕ್ಷಿತ್ ಕೃಷ್ಣ ಶ್ರೀಪಾದ್** ಅವರು ನೀಡುವರು ಹಾಗೂ ಸದರಿ ಸಮಾರಂಭದ ಅಧ್ಯಕ್ಷತೆಯನ್ನು **ಪ್ರೊ. ಎನ್.ಕೆ. ಲೋಕನಾಥ್**, ಮಾನ್ಯ ಕುಲಪತಿಗಳು ವಹಿಸಲಿದ್ದಾರೆ.

ಈ ಹಿನ್ನೆಲೆಯಲ್ಲಿ ಇದು ವಿಶ್ವವಿದ್ಯಾನಿಲಯದ **"ಶಿಕ್ಷಕರ ದಿನಾಚರಣೆ"** ಕಾರ್ಯಕ್ರಮವಾಗಿದ್ದು, ವಿಶ್ವವಿದ್ಯಾನಿಲಯದಲ್ಲಿ ಸೇವೆ ಸಲ್ಲಿಸುತ್ತಿರುವ ಎಲ್ಲಾ ಖಾಯಂ/ತಾತ್ಕಾಲಿಕ ಬೋಧಕರು, ಬೋಧಕೇತರರು, ಅತಿಥಿ ಉಪನ್ಯಾಸಕರು, ಸಂಶೋಧಕರು ಹಾಗೂ ವಿದ್ಯಾರ್ಥಿಗಳು ದಿನಾಂಕ.05-09-2026ರಂದು ಬೆಳಗ್ಗೆ 10.30 ಗಂಟೆಗೆ ಕ್ರಾಫರ್ಡ್ ಭವನದ ಸಭಾಂಗಣದಲ್ಲಿ ಕಡ್ಡಾಯವಾಗಿ ಆಸೀನರಾಗಲು ತಿಳಿಸಲಾಗಿದೆ.

**ಸದರಿ ಕಾರ್ಯಕ್ರಮಕ್ಕೆ ಹಾಜರಾತಿಯನ್ನು ಕಡ್ಡಾಯಗೊಳಿಸಲಾಗಿದೆ, ಕಾರ್ಯಕ್ರಮ ಮುಗಿದ ನಂತರ ತಮ್ಮ ವಿಭಾಗ/ಕಛೇರಿ/ತರಗತಿಗಳಿಗೆ ಹಾಜರಾಗುವುದು.**

ಕುಲಸಚಿವರು
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

ಗೆ,

1. ಎಲ್ಲಾ ನಿಕಾಯದ ಡೀನರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
2. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ಮಾನ್ಯ ಕುಲಪತಿಗಳ ವಿಶೇಷಾಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ಸಂಯೋಜನಾಧಿಕಾರಿಗಳು ಮತ್ತು ಅಧ್ಯಾಪಕರು, ಮೈ.ವಿ.ವಿ.ನಿಲಯ, ಮೈಸೂರು.
6. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು.
7. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈ.ವಿ.ವಿ.ನಿಲಯ, ಮೈಸೂರು.
8. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
9. ಸಂಯೋಜಕರು, ಐ.ಸಿ.ಡಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು-ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.

(5–9:) ಈ ವಿಷಯವನ್ನು ತಮ್ಮ ವಿಭಾಗದ ಎಲ್ಲಾ ಅಧ್ಯಾಪಕರು/ ಅತಿಥಿ ಉಪನ್ಯಾಸಕರು/ ಸಂಶೋಧಕರುಗಳ ಗಮನಕ್ಕೆ ತರಬೇಕೆಂದು ತಿಳಿಸಿದೆ . ಹಾಗೂ ಈ ಕಾರ್ಯಕ್ರಮವು ಶಿಕ್ಷಕರ ಗೌರವದ ಸಂಕೇತವಾಗಿರುವುದರಿಂದ ಎಲ್ಲರೂ ಭಾಗವಹಿಸುವಂತೆ ಸೂಕ್ತ ಕ್ರಮ ಕೈಗೊಂಡು, ಕಾರ್ಯಕ್ರಮ ಯಶಸ್ವಿಯಾಗಲು ಸಹಕರಿಸುವಂತೆ ಕೋರಿದೆ.

10. ಮಾನ್ಯ ಕುಲಪತಿಯವರ/ಕುಲಸಚಿವ/ಕುಲಸಚಿವ(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈವಿವಿ, ಮೈಸೂರು.
11. ಕಛೇರಿ ಪ್ರತಿ.